**National**
**Kannada**
**17.08.2025 / 1.10 pm**
**ಆಕಾಶವಾಣಿ, ಬೆಂಗಳೂರು**

# ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು :</u>

೧. ಶಾಸಕಾಂಗದಲ್ಲಿ ರಾಷ್ಟ್ರಪತಿ ಅಧಿಕಾರ ವ್ಯಾಪ್ತಿ ಕುರಿತು ನಾಳೆಯಿಂದ ಸುಪ್ರೀಂ ಕೋರ್ಟ್‌ನ ಸಂವಿಧಾನ ಪೀಠದಲ್ಲಿ ವಿಚಾರಣೆ

೨. ಬಿರುಸುಗೊಂಡ ಉಪರಾಷ್ಟ್ರಪತಿ ಚುನಾವಣೆ ಪ್ರಕ್ರಿಯೆ: ನಾಮಪತ್ರ ಸಲ್ಲಿಕೆಗೆ ಆಗಸ್ಟ್ ೨೨ ಅಂತಿಮ ದಿನ: ಇಂದು ಎನ್‌ಡಿಎ ಅಭ್ಯರ್ಥಿ ಪ್ರಕಟಿಸುವ ನಿರೀಕ್ಷೆ

೩. ದೇಶಾದ್ಯಂತ ಭಾರೀ ಮಳೆ ನಿರೀಕ್ಷೆ: ತೀವ್ರಗೊಂಡ ಮುಂಗಾರು ಅಬ್ಬರ, ಮಹಾರಾಷ್ಟ್ರದಲ್ಲಿ ಪ್ರವಾಹ, ಜಮ್ಮು ಕಾಶ್ಮೀರದಲ್ಲಿ ಮೇಘಸ್ಫೋಟ

೪. ಬೇಗಾ ಓಪನ್ ಸ್ಕ್ವ್ಯಾಷ್ ಟೂರ್ನಿ: ಫೈನಲ್‌ನಲ್ಲಿ ಈಜಿಪ್ಟ್‌ನ ಹಬೀಬಾ ಹನಿ ವಿರುದ್ಧ ಭಾರತದ ಅನಹತ್ ಸಿಂಗ್ ಪರಾಭವ

><><><><><><><

ಶಾಸಕಾಂಗದಲ್ಲಿ ರಾಷ್ಟ್ರಪತಿ ಅವರ ಅಧಿಕಾರ ವ್ಯಾಪ್ತಿ ಕುರಿತು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೂಚಿಸಿರುವ ಅಭಿಪ್ರಾಯಗಳ ಕುರಿತಾದ ಅರ್ಜಿಗಳ ವಿಚಾರಣೆಯನ್ನು ನಾಳೆಯಿಂದ ಸುಪ್ರೀಂ ಕೋರ್ಟ್ ನ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಐವರು ನ್ಯಾಯಾಧೀಶರ ಸಂವಿಧಾನ ಪೀಠ ಆರಂಭಿಸಲಿದೆ. ಸಂವಿಧಾನದ ೧೪೩ನೇ ವಿಧಿ ಅನ್ವಯ ಯಾವುದೇ ವಿಧೇಯಕಗಳಿಗೆ ಅಂಕಿತ ಹಾಕಲು ರಾಷ್ಟ್ರಪತಿ ಅವರಿಗೆ ಕಾಲಮಿತಿ ನಿಗದಿಪಡಿಸುವ ಅಧಿಕಾರವಿಲ್ಲ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಪ್ರಾಯಪಟ್ಟಿದ್ದು, ಈ ಸಂಬಂಧ ನ್ಯಾಯಾಂಗದ ಸಲಹೆಯನ್ನು ನೀಡುವಂತೆ ಸೂಚಿಸಿದ್ದರು. ಸಂವಿಧಾನದ ೨೦೦ ಮತ್ತು ೨೦೧ನೇ ವಿಧಿ ಪ್ರಕಾರವು ನ್ಯಾಯಾಂಗವು ರಾಷ್ಟ್ರಪತಿ ಅವರಿಗೆ ಯಾವುದೇ ಕಾಲಮಿತಿಯನ್ನು ನಿಗದಿಪಡಿಸುವಂತಿಲ್ಲ. ಅಲ್ಲದೇ, ಶಾಸನಗಳ ರಚನೆ ಕುರಿತು, ವಿಷಯದಲ್ಲಿ ರಾಷ್ಟ್ರಪತಿ ಹಾಗೂ ರಾಜ್ಯಪಾಲರ ಅಧಿಕಾರ ವ್ಯಾಪ್ತಿಯ ಬಗ್ಗೆ ಸಂವಿಧಾನದಲ್ಲಿ ಸ್ಪಷ್ಟ ಉಲ್ಲೇಖವಿದ್ದು, ಈ ವಿಷಯದಲ್ಲಿ ನ್ಯಾಯಾಂಗ ಮಧ್ಯ ಪ್ರವೇಶಿಸುವಂತಿಲ್ಲ ಎಂದು ಸಹ ರಾಷ್ಟ್ರಪತಿ ಅವರು ಸೂಚಿಸಿದ್ದರು. ಕಳೆದ ಏಪ್ರಿಲ್ ನಲ್ಲಿ ಸುಪ್ರೀಂ ಕೋರ್ಟ್ ಯಾವುದೇ ವಿಧೇಯಕಗಳನ್ನು ಸರ್ಕಾರ ಸಲ್ಲಿಸಿದ ಸಂದರ್ಭದಲ್ಲಿ

ರಾಜ್ಯಪಾಲರು ಮತ್ತು ರಾಷ್ಟ್ರಪತಿ ಅವರು ಅದನ್ನು ದೀರ್ಘಾವಧಿಯ ವರೆಗೆ ತಮ್ಮಲ್ಲಿ ಉಳಿಸಿಕೊಳ್ಳುವಂತಿಲ್ಲ, ಮೂರು ತಿಂಗಳೊಳಗಾಗಿ ವಿಧೇಯಕಗಳನ್ನು ಅನುಮೋದಿಸಿ ಅಥವಾ ತಿರಸ್ಕರಿಸಿ ನಿರ್ಧಾರ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿತ್ತು. ಈ ಸಂಬಂಧ ಸಲ್ಲಿಸಿರುವ ಆಕ್ಷೇಪಣೆಗಳಿಗೆ ಸುಪ್ರೀಂ ಕೋರ್ಟ್ ಇದೇ ೧೯ರಂದು ಹಾಗೂ ಕೇಂದ್ರ ಮತ್ತು ಸಂಬಂಧಿಸಿದ ರಾಜ್ಯಗಳು ಸಲ್ಲಿಸಿರುವ ಅರ್ಜಿಗಳಿಗೆ ಇದೇ ೨೦, ೨೧, ಮತ್ತು ೨೬ರಂದು ಹಾಗೂ ವಿರೋಧಿಸಿರುವ ರಾಜ್ಯಗಳ ವಿಚಾರಣೆಯನ್ನು ಸೆಪ್ಟೆಂಬರ್ ೨,೩ ಮತ್ತು ೯ರಂದು ನಡೆಸಲಿದೆ.

><><><><><><><

ಉಪರಾಷ್ಟ್ರಪತಿ ಚುನಾವಣೆ ಪ್ರಕ್ರಿಯೆ ಬಿರುಸುಗೊಂಡಿದೆ. ನಾಮಪತ್ರ ಸಲ್ಲಿಕೆ ಆರಂಭವಾಗಿದ್ದು, ಗುರುವಾರ ಉಮೇದುವಾರಿಕೆ ಸಲ್ಲಿಸಲು ಕೊನೆಯ ದಿನವಾಗಿದೆ. ಸೆಪ್ಟೆಂಬರ್ ೯ ರಂದು ಚುನಾವಣೆ ನಡೆಯಲಿದೆ.  ಈ ಹಿನ್ನೆಲೆಯಲ್ಲಿ ದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಬಿಜೆಪಿ ಸಂಸದೀಯ ಮಂಡಳಿ ಸಭೆ ನಡೆಯಲಿದ್ದು, ಉಪರಾಷ್ಟ್ರಪತಿ ಸ್ಥಾನಕ್ಕೆ ಅಭ್ಯರ್ಥಿಯನ್ನು ಅಂತಿಮಗೊಳಿಸುವ ಸಾಧ್ಯತೆಗಳಿವೆ.  ಈ ತಿಂಗಳ ೬ರಂದು ಎನ್‌ಡಿಎ ಪ್ರಮುಖರೊಂದಿಗೆ ನಡೆಸಿದ ಸಭೆಯಲ್ಲಿ ಅಭ್ಯರ್ಥಿಯನ್ನು ಆಯ್ಕೆ ಮಾಡುವ ಜವಾಬ್ದಾರಿಯನ್ನು ಪ್ರಧಾನಿ ನರೇಂದ್ರಮೋದಿ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರಿಗೆ ನೀಡಲಾಗಿತ್ತು. ಸಂಸತ್ತಿನ ಉಭಯ ಸದನಗಳಲ್ಲಿ ಎನ್ ಡಿ ಎಗೆ ಸಂಪೂರ್ಣ ಬಹುಮತವಿರುವ ಹಿನ್ನೆಲೆಯಲ್ಲಿ ಎನ್‌ಡಿಎ ಅಭ್ಯರ್ಥಿ ಉಪರಾಷ್ಟ್ರಪತಿಯಾಗಿ ಅನಾಯಾಸವಾಗಿ ಆಯ್ಕೆಯಾಗುವ ಸಾಧ್ಯತೆಯಿದೆ.

><><><><><><><

ದೇಶಾದ್ಯಂತ ಮುಂಗಾರು ಅಬ್ಬರ ತೀವ್ರವಾಗಿದ್ದು, ಮಹಾರಾಷ್ಟ್ರದಲ್ಲಿ ಭಾರಿ ಪ್ರಮಾಣದಲ್ಲಿ ಮಳೆಯಾಗುತ್ತಿದೆ. ಕಳೆದ ೨೪ ಗಂಟೆಗಳಲ್ಲಿ ಸುಮಾರು ೨೪೪ ಮಿಲಿಮೀಟರ್ ಮಳೆಯಾಗಿದೆ. ಕಳೆದ ಐದು ವರ್ಷಗಳಲ್ಲಿ ಮುಂಬೈನಲ್ಲಿ ಈ ಪ್ರಮಾಣದಲ್ಲಿ ಮಳೆಯಾಗಿರುವುದು ಇದೇ ಮೊದಲು. ಸಾಂತಾ ಕ್ರೂಸ್, ವಿಕ್ರೋಲಿ, ಸರಾನ್, ಜುಹು, ಬಾಂದ್ರಾ, ಬೈಕುಲಾಗಳಲ್ಲಿ ೧೫೦ ಮಿಲಿಮೀಟರ್ ಗಳಿಗಿಂತಲೂ ಹೆಚ್ಚಿನ ಮಳೆಯಾಗಿದೆ. ತಗ್ಗು ಪ್ರದೇಶಗಳಿಗೆ ನೀರು ನುಗ್ಗಿ, ಎರಡು ಕಡೆಗಳಲ್ಲಿ ಭೂ ಕುಸಿತ ಸಂಭವಿಸಿದ್ದು ಇಬ್ಬರು ಮೃತಪಟ್ಟಿದ್ದಾರೆ. ಈ ನಡುವೆ ಕೇರಳದ ಇಡುಕಿ, ಎರ್ನಾಕುಲಂ, ತ್ರಿಶೂರ್, ಕಣ್ಣೂರು ಮತ್ತು ಕಾಸರಗೊಡು  ಜಿಲ್ಲೆಗಳಲ್ಲಿ ಇಂದು ಭಾರಿ ಮಳೆಯಾಗಲಿದ್ದು, ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದೆ.  ಮುಂದಿನ ಐದು ದಿನಗಳ ಕಾಲ ಕೇರಳ ಹಾಗೂ ಕರ್ನಾಟಕದ ಕರಾವಳಿ ಸೇರಿದಂತೆ ಹಲವು ಭಾಗಗಳಲ್ಲಿ ಬಿರುಗಾಳಿಯೊಂದಿಗೆ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

><><><><><><><

ಜಮ್ಮು ಕಾಶ್ಮೀರದ ಕಥುವಾ ಜಿಲ್ಲೆಯಲ್ಲಿ ಮೇಘಸ್ಫೋಟ ಸಂಭವಿಸಿದೆ. ಈ ಪ್ರಕೃತಿ ವಿಕೋಪಕ್ಕೆ ನಾಲ್ವರು ಬಲಿಯಾಗಿದ್ದು, ೬ ಮಂದಿ ಗಾಯಗೊಂಡಿದ್ದಾರೆ. ಭಾರೀ ಮಳೆ ಜೊತೆಗೆ ಕೆಲವೆಡೆ ಭೂ ಕುಸಿತ ಉಂಟಾಗಿರುವುದಾಗಿ ಎಂದು ವರದಿಯಾಗಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರು ಉಪರಾಜ್ಯಪಾಲ ಮನೋಜ್ ಸಿನ್ಹಾ ಹಾಗೂ ಜಮ್ಮು ಕಾಶ್ಮೀರ ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಅವರ ಜೊತೆ ದೂರವಾಣಿ ಮೂಲಕ ಮಾತನಾಡಿ ಮಾಹಿತಿ ಪಡೆದರು. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅಮಿತ್ ಷಾ ಸ್ಥಳೀಯ ಜಿಲ್ಲಾಡಳಿತದಿಂದ ಪರಿಹಾರ ಕಾರ್ಯ ಪ್ರಗತಿಯಲ್ಲಿದೆ. ಮೇಘಸ್ಫೋಟ ಸ್ಥಳಕ್ಕೆ ಎನ್‌ಡಿಆರ್‌ಎಫ್ ತಂಡ ಧಾವಿಸುತ್ತಿದೆ. ಕೇಂದ್ರದಿಂದ ಸಾಧ್ಯವಿರುವ ಎಲ್ಲಾ ರೀತಿಯಲ್ಲಿ ನೆರವು ನೀಡುವುದಾಗಿ ಭರವಸೆ ನೀಡಿದ್ದಾರೆ.

><><><><><><><

ಭಾರತದ ಬಾಹ್ಯಾಕಾಶ ಕ್ಷೇತ್ರದಲ್ಲಿ ತನ್ನದೇ ಆದ ಹೆಗ್ಗುರುತು ಮೂಡಿಸಿರುವ ಕ್ಯಾಪ್ಟನ್ ಶುಭಾಂಶು ಶುಕ್ಲಾ ಇಂದು ಮುಂಜಾನೆ ಸ್ವದೇಶಕ್ಕೆ ವಾಪಸಾಗಿದ್ದಾರೆ. ದೆಹಲಿಯ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದಾಗ ಅವರಿಗೆ ಆತ್ಮೀಯ ಸ್ವಾಗತ ದೊರೆಯಿತು. ಅವರನ್ನು ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮತ್ತು ಇಸ್ರೋ ಅಧ್ಯಕ್ಷ ಡಾ. ವಿ. ನಾರಾಯಣನ್ ಅವರು ವಿಮಾನ ನಿಲ್ದಾಣದಲ್ಲಿ ಆತ್ಮೀಯವಾಗಿ ಬರಮಾಡಿಕೊಂಡರು. ಅವರನ್ನು ಮನೆಗೆ ಸ್ವಾಗತಿಸಲು ಅವರ ಪತ್ನಿ ಮತ್ತು ಪುತ್ರ ಕೂಡ ಹಾಜರಿದ್ದರು.

><><><><><><><

ವಿಶ್ವ ವಿಖ್ಯಾತ ನಾಡಹಬ್ಬ ದಸರಾ ಸಂಭ್ರಮ ಕಳೆ ಕಟ್ಟುತ್ತಿದೆ. ಜಂಬೂ ಸವಾರಿ ಉತ್ಸವಕ್ಕೆ ಗಜಪಡೆ ಮೊದಲ ಹಂತದ ತಾಲೀಮು ಆರಂಭಿಸಿದ್ದು, ಇವುಗಳು ಆರೋಗ್ಯ ದೃಷ್ಟಿಯಿಂದ ಉತ್ತಮ ರೀತಿಯ ಆಹಾರ ನೀಡಲಾಗುತ್ತಿದೆ. ನಿನ್ನೆ ಮೈಸೂರಿನ ಅರಮನೆ ಆವರಣದಲ್ಲಿ ದಸರಾ ಆನೆಗಳಿಗೆ ವಿಶೇಷ ಆಹಾರ ನೀಡಲಾಯಿತು. ಗಜಪಡೆಯ ಸಾಮರ್ಥ್ಯ ವೃದ್ಧಿಗೆ ಹಸಿರುಕಾಳು, ಕುಸುಬಲಕ್ಕಿ, ಉದ್ದಿನಕಾಳು, ಈರುಳ್ಳಿ, ಅವಲಕ್ಕಿ, ಕಾಳು, ಬೆಲ್ಲ, ಕಬ್ಬು, ಭತ್ತ, ತೆಂಗಿನಕಾಯಿ, ತರಕಾರಿ ಮಿಶ್ರಣದ ಪೌಷ್ಟಿಕ ಆಹಾರ ಕೊಡಲಾಗುತ್ತಿದೆ. ಸುದ್ದಿಗಾರರೊಂದಿಗೆ ಡಿಸಿಎಫ್ ಡಾ.ಐ.ಬಿ.ಪ್ರಭು ಗೌಡ ಮಾತನಾಡಿ, ಅಂಬಾರಿ ಆನೆ ಅಭಿಮನ್ಯು ನೇತೃತ್ವದ ಗಜಪಡೆಯ ಆರೋಗ್ಯ ಹಾಗೂ ಸಾಮರ್ಥ್ಯ ವೃದ್ಧಿಗೆ ಪೌಷ್ಟಿಕಾಂಶದಿಂದ ಕೂಡಿದ ವಿಶೇಷ ಆಹಾರ ನೀಡಲಾಗುತ್ತಿದೆ. ಗಂಡಾನೆಗಳಿಗೆ

ಪ್ರತಿನಿತ್ಯ ೭೫೦ ಕೆ.ಜಿ.ಮತ್ತು ಹೆಣ್ಣಾನೆಗೆ ೫೫೦ ರಿಂದ ೬೦೦ ಕೆ.ಜಿ. ಮೇವನ್ನು ನೀಡಲಾಗುವುದು ಎಂದು ಮಾಹಿತಿ ನೀಡಿದರು.

><><><><><><><

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಾಗೂ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ನಡುವೆ ಅಲಾಸ್ಕಾದಲ್ಲಿ ನಡೆದ ಮಾತುಕತೆ ಫಲಪ್ರದವಾಗಿದ್ದು, ವಿಶ್ವಶಾಂತಿಯತ್ತ ಮಹತ್ವದ ಹೆಜ್ಜೆಯಾಗಿದೆ ಎಂದು ಭಾರತ ಬಣ್ಣಿಸಿದೆ. ವಿದೇಶಾಂಗ ಇಲಾಖೆ ಈ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಹೇಳಿಕೆ ನೀಡಿದ್ದು, ಉಭಯ ನಾಯಕರು ನಡೆಸಿರುವ ಈ ಮಾತುಕತೆ ರಷ್ಯಾ -ಉಕ್ರೇನ್ ನಡುವಿನ ಸುದೀರ್ಘ ಸಂಘರ್ಷವನ್ನು ಕೊನೆಗಾಣಿಸಲು ಸಹಕಾರಿಯಾಗಿದೆ ಎಂದು ಹೇಳಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಹ ರಷ್ಯಾ ಜೊತೆಗಿನ ಸಂಘರ್ಷವನ್ನು ಕೊನೆಗೊಳಿಸಲು ಉಕ್ರೇನ್ ಕದನ ವಿರಾಮಕ್ಕೆ ಒಪ್ಪಿಕೊಳ್ಳುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಉಭಯ ನಾಯಕರ ಭೇಟಿ ನಡೆದ ಬಳಿಕ ಟ್ರಂಪ್ ಅವರ ಹೇಳಿಕೆ ಹೊರಬಿದ್ದಿದ್ದೆ. ಇದೇ ವೇಳೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಸಹ ಶಾಂತಿ ಮಾತುಕತೆಯತ್ತ ಆಸಕ್ತಿ ತೋರಿದ್ದು, ಉಕ್ರೇನ್ ಅಧ್ಯಕ್ಷ ಝೆಲನ್ಸ್ಕಿ ಅವರು ನಾಳೆ ವಾಷ್ಟಿಂಗನ್ ನಲ್ಲಿ ಡೊನಾಲ್ ಟ್ರಂಪ್ ಅವರನ್ನು ಭೇಟಿಯಾಗಲಿದ್ದಾರೆ. ಈಗಾಗಲೇ ಡೊನಾಲ್ಡ್ ಟ್ರಂಪ್ ಝೆಲನ್ಸ್ಕಿ ಅವರೊಂದಿಗೆ ದೂರವಾಣಿಯಲ್ಲಿ ಮಾತುಕತೆ ನಡೆಸಿದ್ದು, ಅವರನ್ನು ಅಮೆರಿಕಕ್ಕೆ ಆಹ್ವಾನಿಸಿದ್ದಾರೆ.

><><><><><><><

ಉತ್ತರ ಕೆರೆಬಿಯನ್ ದ್ವೀಪ ಸಮೂಹದಲ್ಲಿ ಎರಿನ್ ಚಂಡ ಮಾರುತ ಅಪ್ಪಳಿಸಿದ್ದು, ಇದರಿಂದ ಅಟ್ಲಾಂಟಿಕ್ ಸಮುದ್ರ ಭಾಗದಲ್ಲಿ ಭಾರೀ ಬಿರುಗಾಳಿ ಮತ್ತು ಮಳೆಯಾಗುವ ನಿರೀಕ್ಷೆಯಿದೆ. ಪ್ರತಿಗಂಟೆಗೆ ೨೪೦ ಕಿಲೋ ಮೀಟರ್ ವೇಗದಲ್ಲಿ ಚಂಡಮಾರುತ ಬೀಸುತ್ತಿದೆ ಎಂದು ಅಮೆರಿಕಾದ ರಾಷ್ಟ್ರೀಯ ಚಂಡಮಾರುತ ಕೇಂದ್ರ ಮಾಹಿತಿ ನೀಡಿದೆ. ಇದರಿಂದ ಉತ್ತರ ಲೀವಾರ್ಡ್ ದ್ವೀಪ ಮತ್ತಿತರ ಭಾಗಗಳಲ್ಲಿ ವ್ಯಾಪಕ ಮಳೆಯಾಗುವ ಸಂಭವವಿದೆ.

><><><><><><><

ಆಸ್ಟ್ರೇಲಿಯಾದಲ್ಲಿಂದು ನಡೆದ ಬೇಗಾ ಓಪನ್ ಸ್ಕ್ಯಾಷ್ ಟೂರ್ನಿಯ ಫೈನಲ್‌ನಲ್ಲಿ ಭಾರತದ ಅನಹತ್ ಸಿಂಗ್ ಅವರು ಈಜಿಪ್ಟ್‌ನ ಹಬೀಬಾ ಹನಿ ವಿರುದ್ಧ ಪರಾಭವಗೊಂಡಿದ್ದಾರೆ. ೧೭ ವರ್ಷದ ಅನಹತ್ ಸಿಂಗ್, ಇದೇ ಮೊದಲ ಬಾರಿಗೆ ಜಾಗತಿಕ ಮಟ್ಟದ ಟೂರ್ನಿಯಲ್ಲಿ ಪಾಲ್ಗೊಂಡಿದ್ದು, ಮೊದಲ ಗೇಮ್ ಆನ್ನು ೧೧ - ೯ ರ ಅಂತರದಲ್ಲಿ ಗೆದ್ದರು. ನಂತರ ೧೧-೫, ೧೧-೮ ರ ಅಂತರದಲ್ಲಿ

ಪರಾಭವಗೊಂಡರು. ಈಜಿಪ್ಟ್ ನ ಆಟಗಾರ ೪ನೇ ಗೇಮ್ ನಲ್ಲಿ ೧೦-೪ ಅಂತರದಿಂದ ಮುನ್ನಡೆಯಲ್ಲಿದ್ದಾಗ ಅನಹತ್ ಪಂದ್ಯದಿಂದ ನಿವೃತ್ತಿ ಘೋಷಿಸಿದರು.

><><><><><><><><

ಕೋಲ್ಕತ್ತಾದ ವಿವೇಕಾನಂದ ಯುಬಾ ಭಾರತಿ ಕ್ರೀಡಾಂಗಣದಲ್ಲಿ ನಡೆಯಲಿರುವ ಡುರಾಂಡ್ ಕಪ್ ಫುಟ್ಬಾಲ್‌ನಲ್ಲಿ ಕ್ವಾರ್ಟರ್ ಫೈನಲ್ಸ್‌ನಲ್ಲಿ ಈಸ್ಟ್ ಬೆಂಗಾಲ್ ತಂಡವನ್ನು ಮೋಹನ್ ಬಗಾನ್ ಸೂಪರ್ ಜೈಂಟ್ ತಂಡ ಇಂದು ಎದುರಿಸಲಿದೆ. ಪಂದ್ಯವು ಸಂಜೆ ೭:೦೦ ಗಂಟೆಗೆ ಆರಂಭವಾಗಲಿದೆ. ಎರಡೂ ತಂಡಗಳು ತಮ್ಮ ಎಲ್ಲಾ ಗುಂಪು ಹಂತದ ಪಂದ್ಯಗಳನ್ನು ಗೆದ್ದು ಅತ್ಯುತ್ತಮ ಫಾರ್ಮ್‌ನಲ್ಲಿರುವ ಕಾರಣ ವ?ದ ಅತಿದೊಡ್ಡ ಮುಖಾಮುಖಿ ಪಂದ್ಯ ಇದಾಗಿದೆ.

><><><><><><><><

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ(ಕೆಎಸ್‌ಸಿಎ) ಮೈಸೂರಿನಲ್ಲಿ ಆಯೋಜಿಸಿರುವ ಪ್ರತಿಷ್ಠಿತ ಮಹಾರಾಜ ಟ್ರೋಫಿ-೨೦೨೫ರ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ಇಂದು ಮಂಗಳೂರು ಡ್ರಾಗನ್ಸ್ ಮತ್ತು ಬೆಂಗಳೂರು ಬ್ಲಾಸ್ಟರ್ಸ್ ತಂಡಗಳ ನಡುವೆ ಹಣಹಣಿ ನಡೆಯಲಿದೆ. ಮೈಸೂರಿನಲ್ಲಿನ ಮಾನಸಗಂಗೋತ್ರಿಯ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರೀಡಾಂಗಣದಲ್ಲಿ ಇಂದು ಮದ್ಯಾಹ್ನ ೩:೧೫ಕ್ಕೆ ಪಂದ್ಯ ಆರಂಭವಾಗಲಿದೆ. ಬಳಿಕ ಸಂಜೆ ೭.೧೫ಕ್ಕೆ ಇದೆ ಮೈದಾನದಲ್ಲಿ ಮೈಸೂರು ವಾರಿಯರ್ಸ್ ಮತ್ತು ಶಿವಮೊಗ್ಗ ಲಯನ್ಸ್ ತಂಡಗಳ ನಡುವೆ ಎರಡನೇ ಪಂದ್ಯ ನಡೆಯಲಿದೆ.

><><><><><><><><